ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪಿಜಿಸಿಇಟಿ/2023 ದಿನಾಂಕ: 20-02-2024

## ಪ್ರಕಟಣೆ

### ಪಿಜಿಸಿಇಟಿ-2023 – ಕೊನೆಯ ಸುತ್ತಿನ ಸೀಟು ಹಂಚಿಕೆ ವೇಳಾಪಟ್ಟಿ ಮತ್ತು ಸೂಚನೆಗಳು

2023ನೇ ಸಾಲಿನ ಎಂಬಿಎ, ಎಂಸಿಎ ಮತ್ತು ಎಂಇ / ಎಂ.ಟೆಕ್ ಕೋರ್ಸುಗಳ ಪ್ರವೇಶಾತಿಗೆ ಕೊನೆಯ ಸುತ್ತಿನ ಸೀಟು ಹಂಚಿಕೆಯನ್ನು ನಡೆಸಲಾಗುವುದು. ಮೊದಲನೆ ಅಥವಾ ಎರಡನೇ ಸುತ್ತಿನ ಸೀಟು ಹಂಚಿಕೆಯ ನಂತರ ಉಳಿದಿರುವ, ರದ್ದು ಪಡಿಸಿಕೊಂಡಿರುವ ಸೀಟುಗಳನ್ನು ಈ ಸುತ್ತಿನಲ್ಲಿ ಹಂಚಿಕೆಗೆ ಪರಿಗಣಿಸಲಾಗುವುದು.

1. ಪಿಜಿಸಿಇಟಿ-2023 ರ‍್ಯಾಂಕ್ ಹೊಂದಿ ಯಾವುದೇ ಸೀಟು ಹಂಚಿಕೆಯಾಗದೇ ಇರುವ ಅರ್ಹ ಅಭ್ಯರ್ಥಿಗಳು ಮಾತ್ರ ಈ ಸುತ್ತಿನಲ್ಲಿ ಭಾಗವಹಿಸಲು ಅರ್ಹತೆ ಪಡೆಯುತ್ತಾರೆ.
2. ಮೊದಲನೆ ಸುತ್ತಿನಲ್ಲಿ ಅಥವಾ ಎರಡನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಭಾಗವಹಿಸಲು ಅರ್ಹತೆ ಇರುವುದಿಲ್ಲ.
3. ಹಿಂದಿನ ಸುತ್ತುಗಳಲ್ಲಿ ಸೀಟು ಹಂಚಿಕೆಯಾಗಿ ಸೀಟನ್ನು ರದ್ದು ಪಡಿಸಿಕೊಂಡಿರುವ ಅಭ್ಯರ್ಥಿಗಳು ಸಹ ಈ ಸುತ್ತಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.
4. ಈ ಸುತ್ತಿನಲ್ಲಿ ಭಾಗವಹಿಸಲು ಆಸಕ್ತ ಇರುವ ಅರ್ಹ ಅಭ್ಯರ್ಥಿಗಳು ಹೊಸದಾಗಿ ಇಚ್ಛೆ / ಆಯ್ಕೆಗಳನ್ನು ದಾಖಲಿಸಬೇಕು. ಈ ಮೊದಲು ದಾಖಲಿಸಿದ್ದ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಲಾಗುವುದಿಲ್ಲ.
5. ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಅಥವಾ ಎರಡನೇ ಸುತ್ತಿನಲ್ಲಿ ತಮಗೆ ದೊರೆತಿರುವ ಸೀಟು ರದ್ದುಪಡಿಸಿಕೊಳ್ಳಬೇಕಾದಲ್ಲಿ **22-02-2024** ಬೆ. 11.00 ರೊಳಗಾಗಿ ಆನ್‌ಲೈನ್ ಮುಖಾಂತರ ರದ್ದುಪಡಿಸಿಕೊಳ್ಳಬಹುದು. ಅಂತಹ ಅಭ್ಯರ್ಥಿಗಳಿಗೆ ರೂ.5,000/- ಕಟಾವು ಮಾಡಿಕೊಂಡು ಉಳಿದ ಮೊತ್ತವನ್ನು ಹಿಂದಿರುಗಿಸಲಾಗುವುದು.
6. **22-02-2024** ಬೆ. 11.00 ರ ನಂತರ, ಸೀಟು ರದ್ದುಪಡಿಸಿಕೊಳ್ಳುವ ಪೋರ್ಟಲ್ ತೆರೆಯಲಾಗುವುದಿಲ್ಲ; ಮತ್ತು ಸೀಟು ರದ್ದು ಪಡಿಸಲು ಸಲ್ಲಿಸುವ ಮನವಿಯನ್ನು ಪುರಸ್ಕರಿಸುವುದಿಲ್ಲ; ಮತ್ತು ಅಭ್ಯರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹತೆ ಪಡೆಯುವುದಿಲ್ಲ.

ವೇಳಾಪಟ್ಟಿ

| ಕ್ರ.ಸಂ. | Particulars | Date and Time |
|---|---|---|
| 1 | ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 21-02-2024 after 11.00 am |
| 2 | ಹೊಸದಾಗಿ ಇಚ್ಛೆ /ಆಯ್ಕೆಗಳನ್ನು ದಾಖಲಿಸುವುದು – ಈ ಮೊದಲು ದಾಖಲಿಸದ್ದ ಇಚ್ಛೆ / ಆಯ್ಕೆಗಳನ್ನು ಪರಿಗಣಿಸುವುದಿಲ್ಲ | From 11.00 am on 21-02-2024 to 23-02-2024 up to 11.00 am |
| 3 | ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆ | 23-02-2024 after 6.00 pm |
| 4 | ಚಲನ್ ಡೌನ್‌ಲೋಡ್, ಶುಲ್ಕ ಪಾವತಿ ಮಾಡುವುದು | 26-02-2024 to 28-02-2024 upto 4.00 pm |
| 5 | ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳುವುದು | 29-02-2024 before 3.30 pm |
| 6 | ಅಭ್ಯರ್ಥಿಗಳು ಕಾಲೇಜಿನಲ್ಲಿ ಪ್ರವೇಶ ಪಡೆಯಲು ಕೊನೆಯ ದಿನಾಂಕ | 29-02-2024 before 5.30 pm |

**ಗಮನಿಸಿ:**

- ಅಭ್ಯರ್ಥಿಗಳು ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಮೊದಲು ಪೋಷಕರೊಡನೆ ಚರ್ಚಿಸಿ ಇಚ್ಛೆ / ಆಯ್ಕೆಗಳನ್ನು ದಾಖಲಿಸಲು ಸೂಚಿಸಿದೆ.
- ಅಭ್ಯರ್ಥಿಗಳು ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಮತ್ತು ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯನ್ನು ಮಾಡುವುದರಿಂದ ಅಭ್ಯರ್ಥಿಯು ಹಂಚಿಕೆಯಾದ ಸೀಟಿಗೆ ಕಡ್ಡಾಯವಾಗಿ ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶ ಪಡೆಯಲು ಸೂಚಿಸಿದೆ.
- ಇಚ್ಛೆ / ಆಯ್ಕೆಗಳನ್ನು ಮತ್ತು ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯನ್ನು ಮಾಡುವುದರಿಂದ ಕೊನೆಯ ಸುತ್ತಿನ ನಂತರ ಸೀಟು ನಿರಾಕರಿಸಲು ಅಥವಾ ರದ್ದುಪಡಿಸಲು ಅವಕಾಶವಿರುವುದಿಲ್ಲ.

**ಗಮನಿಸಿ:** ಅಭ್ಯರ್ಥಿ ತಮ್ಮ ರ‍್ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in